**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | : | **13 (83)** |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 04.12.2023 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ತರಬೇತಿ ಪಡೆದು ಸಿ.ಪಿ.ಎಡ್. ಬಿ.ಪಿ.ಎಡ್ ಮತ್ತು ಎಮ್.ಪಿ.ಎಡ್ ಪೂರ್ಣಗೊಳಿಸಿದ ಅನೇಕ ವಿದ್ಯಾರ್ಥಿಗಳು ನಿರುದ್ಯೋಗಿಗಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ | ಬಂದಿದೆ. |
| ಆ) | ಕಳೆದ 17 ವರ್ಷಗಳಿಂದ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಯಾಗದೇ ಅನೇಕ ಯುವಕರ ವಯೋಮಿತಿ ಮೀರಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; | **ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ**<br>• 2008ನೇ ಸಾಲಿನಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿಯನ್ನು ಮಾಡಿಕೊಳ್ಳಲಾಗಿದೆ.<br>• ಪ್ರಸ್ತುತ 2120 ದೈಹಿಕ ಶಿಕ್ಷಣ ಶಿಕ್ಷಕರ ಖಾಲಿ ಹುದ್ದೆಗಳ ಭರ್ತಿಗೆ ಅನುಮತಿ ನೀಡಲು ಸಹಮತಿ ಕೋರಿ ಕಡತವು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿರುತ್ತದೆ.<br>**ಪ್ರೌಢ ಶಾಲೆಗೆ ಸಂಬಂಧಿಸಿದಂತೆ**<br>• 2014-15ನೇ ಸಾಲಿನಲ್ಲಿ 148 ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ.<br>• ಸರ್ಕಾರದ ಪತ್ರ ಸಂಖ್ಯೆ: ಇಪಿ 14 ಎಲ್‌ಬಿಪಿ 2022, ದಿನಾಂಕ:13/09/2022ರ ಪತ್ರದಲ್ಲಿ ರಾಜ್ಯದ ಸರ್ಕಾರಿ ಪ್ರೌಢಶಾಲೆಗಳಲ್ಲಿ ಖಾಲಿಯಿರುವ ವಿವಿಧ ವೃಂದದ ದೈಹಿಕ ಶಿಕ್ಷಣ ಶಿಕ್ಷಕರ 200 ಹುದ್ದೆಗಳು ಸೇರಿ ಒಟ್ಟು 2500 ಶಿಕ್ಷಕರುಗಳ ಹುದ್ದೆಗಳನ್ನು 15000 ಪದವೀಧರ ಪ್ರಾಥಮಿಕ ಶಾಲಾ ನೇಮಕಾತಿಯಲ್ಲಿ ಭರ್ತಿಯಾಗದೇ ಖಾಲಿ ಉಳಿದ ಹುದ್ದೆಗಳಿಗೆ ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೆ ಒಳಪಟ್ಟು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರವು ಅನುಮತಿ ನೀಡಿರುತ್ತದೆ.<br>ಆದರೆ ಸದರಿ 15000 ಹುದ್ದೆಗಳಲ್ಲಿ ಪ್ರೌಢಶಾಲಾ ಶಿಕ್ಷಕರುಗಳ ನೇಮಕಾತಿಗೆ 1648 ಹುದ್ದೆಗಳು ಮಾತ್ರ ಉಳಿದಿರುವ ಪ್ರಯುಕ್ತ ಪ್ರಸ್ತುತ ಸಾಲಿನಲ್ಲಿ ಒಟ್ಟು 2500 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡುವ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |
| ಇ) | ಪ್ರಸಕ್ತ ಸಾಲಿನಲ್ಲಿ ಅಥವಾ ಮುಂದಿನ ವರ್ಷದಲ್ಲಿ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಚಿಂತನೆ ಸರ್ಕಾರದ ಮುಂದಿದೆಯೇ; ಯಾವ ಕಾಲಮಿತಿಯೊಳಗೆ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಅಧಿಸೂಚನೆ ಹೊರಡಿಸಲಾಗುವುದು; (ವಿವರ ನೀಡುವುದು) | |
| ಈ) | ಪ್ರಸಕ್ತ ನಿರುದ್ಯೋಗಿಗಳು ರಾಜ್ಯವ್ಯಾಪ್ತಿ ಹೋರಾಟಕ್ಕಿಳಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು; (ವಿವರ ನೀಡುವುದು) | |

| | | |
|---|---|---|
| ಉ) | ಪ್ರಾಥಮಿಕ ಮತ್ತು ಪ್ರೌಢ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಸಿ & ಆರ್ ನಿಯಮಾವಳಿಯ ತಿದ್ದುಪಡಿಯ ಕಾರ್ಯ ಯಾವ ಹಂತದಲ್ಲಿದೆ; ಈ ಪ್ರಕ್ರಿಯೆಯನ್ನು ಪ್ರಾರಂಭ ಮಾಡಿದ್ದು ಯಾವಾಗ; ಈ ಪ್ರಕ್ರಿಯೆ ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು; ಸಿ & ಆರ್ ನಿಯಮಾವಳಿಗಳನ್ನು ತಿದ್ದುಪಡಿ ಮಾಡಲು ಇರುವ ಸಮಸ್ಯೆಗಳೇನು; ಯಾವ ಕಾಲಮಿತಿಯೊಳಗೆ ಸಿ & ಆರ್ ತಿದ್ದುಪಡಿ ನಿಯಮ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ಮಾಹಿತಿ ನೀಡುವುದು) | ದೈಹಿಕ ಶಿಕ್ಷಣ ಶಿಕ್ಷಕರ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಯ ಪ್ರಸ್ತಾವನೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ. |

ಸಂಖ್ಯೆ:ಇಪಿ 184 ಎಲ್‌ಬಿಪಿ 2023

(ಎಸ್. ಮಧು ಬಂಗಾರಪ್ಪ)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು